## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 201 ಇಎಸ್‌ಟಿ(7) 2016 /6037/4

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 16/02/2017

### ಸುತ್ತೋಲೆ

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರು ಸೇವಾ ವಿಷಯಗಳು, ವೈಯಕ್ತಿಕ ಹಾಗೂ ಇನ್ನಿತರೆ ವಿಷಯಗಳಿಗೆ ಸಂಬಂಧಿಸದಂತೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಭೇಟಿ ನೀಡುವಾಗ ಸಂಬಂಧಪಟ್ಟ ಪ್ರಾಂಶುಪಾಲರಿಂದ ಅನುಮತಿ ಪಡೆದ ಪತ್ರದೊಂದಿಗೆ **ಅಪರಾಹ್ನ 03.30 ರಿಂದ 05.00 ರವರೆಗೆ** ಮಾತ್ರ ಭೇಟಿ ನೀಡಲು ಹಲವಾರು ಸುತ್ತೋಲೆಗಳು ಹೊರಡಿಸಿ ಸೂಚಿಸಲಾಗಿದ್ದರೂ ಸಹ, ಇತರೆ ವೇಳೆಯಲ್ಲಿ ಪ್ರಾಂಶುಪಾಲರಿಂದ ಅನುಮತಿ ಪತ್ರವನ್ನೂ ಸಹ ಪಡೆಯದೇ ನಿರ್ದೇಶನಾಲಯಕ್ಕೆ ಭೇಟಿ ನೀಡಿ ದೈನಂದಿನ ಕೆಲಸ ಕಾರ್ಯಗಳಿಗೆ ಅಡ್ಡಿಪಡಿಸುತ್ತಿರುವುದನ್ನು ಹಾಗೂ ಕಾಲೇಜಿನ ಪಾಠ ಪ್ರವಚನ /ಕೆಲಸಗಳಲ್ಲಿ ಕುಂದುಂಟಾಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದೆ. ಆದುದರಿಂದ ನಿರ್ದೇಶನಾಲಯಕ್ಕೆ ಭೇಟಿ ನೀಡುವ ಅಧಿಕಾರಿ/ಸಿಬ್ಬಂದಿಯವರು ಕಡ್ಡಾಯವಾಗಿ ಸಂಸ್ಥೆಯ ಪ್ರಾಂಶುಪಾಲರಿಂದ ಪೂರ್ವಾನುಮತಿ ಪಡೆದು ಅನುಮತಿ ಪತ್ರದೊಂದಿಗೆ **03.30 ರಿಂದ 05.00 ವೇಳೆಯಲ್ಲಿ ಮಾತ್ರ ಭೇಟಿ ನೀಡಲು ಸೂಚಿಸಲಾಗಿದೆ.** ತಪ್ಪಿದಲ್ಲಿ ಅಂತಹ ಅಧಿಕಾರಿ/ಸಿಬ್ಬಂದಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವೆ (ನಡತೆ)ನಿಯಮಗಳು 1966ರನ್ವಯ /ಕರ್ನಾಟಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು, 1978 ರನ್ವಯ ಸೂಕ್ತ ಶಿಸ್ತು ಕ್ರಮಕ್ಕೆಗೊಳ್ಳಲು ಕ್ರಮವಹಿಸಲಾಗುವುದು ಎಂದು ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ,

1. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
2. ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ಮೂಲಕ –ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ

ಪ್ರತಿ:

1. ನಿರ್ದೇಶನಾಲಯದ ಎಲ್ಲಾ ಅಧಿಕಾರಿ /ಸಿಬ್ಬಂದಿ ವರ್ಗದವರಿಗೆ
2. ಇ-ಆಡಳಿತ ವಿಭಾಗಕ್ಕೆ –ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು
3. ನಿರ್ದೇಶಕರ ಆಪ್ತ ಶಾಖೆಗೆ
4. ರಕ್ಷಾ ಕಡತಕ್ಕೆ
5. ಕಛೇರಿ ಪ್ರತಿ.